ಅ) ಜಮಖಂಡಿಯು ಒಟ್ಟು ಮಾರಾಟ ಮೊತ್ತದ ಮೇಲೆ ರಿಬೇಟ್ ಲೆಕ್ಕ ಹಾಕಿ ಹಣವನ್ನು ಸರ್ಕಾರದಿಂದ ಮಂಜೂರು ಮಾಡಿಸಿಕೊಳ್ಳಬೇಕಾಗಿರುತ್ತದೆ. ಹಾಗಾಗಿ ಇದನ್ನು ನೈಮಿತ್ತಿಕವಾಗಿ ಬಿಡುಗಡೆ ಮಾಡಲಾಗುವುದಿಲ್ಲ.

ಬಾಗಲಕೋಟೆ ಜಿಲ್ಲೆಯಲ್ಲಿ ಪಶು ಆಸ್ಪತ್ರೆಗಳ ಕೊರತೆ.

1269(1217) ಶ್ರೀ ಬಿ.ಟಿ. ಪಾಟೀಲ್ (ಬೀಳಗಿ) :— ಮಾನ್ಯ ಪಶು ಸಂಗೋಪನೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

2001-2002ನೇ ಸಾಲಿನಲ್ಲಿ ಹೊಸದಾಗಿ ಪಶು ಆಸ್ಪತ್ರೆಗಳನ್ನು ಪ್ರಾರಂಭಿಸಲು ಸರ್ಕಾರ ತೀರ್ಮಾನ ತೆಗೆದುಕೊಂಡಿದೆಯೇ?

ಆ) ಬಾಗಲಕೋಟೆ ಜಿಲ್ಲೆಯಲ್ಲಿ ಪಶು ಆಸ್ಪತ್ರೆಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಈ ಬಗ್ಗೆ ಹೆಚ್ಚಿನ ಪಶು ಆಸ್ಪತ್ರೆ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದೇ? ವಿವರ ನೀಡುವುದು?

ಶ್ರೀ ಎ. ಕೃಷ್ಣಪ್ಪ (ಪಶು ಸಂಗೋಪನೆ ಮತ್ತು ಸಕ್ಕರೆ ಸಚಿವರು) :—

ಅ) ಇಲ್ಲ

ಆ) ಈ ಬಗ್ಗೆ ಮಾಹಿತಿಗಳು ಬಂದಿದೆ.

ಇ) ಪ್ರಸ್ತುತ ಸಾಲಿನಲ್ಲಿ 9 ಪ್ರಾಥಮಿಕ ಪಶು ಚಿಕಿತ್ಸಾ ಕೇಂದ್ರಗಳನ್ನು ಈಗಾಗಲೇ ಮೇಲ್ದರ್ಜೆಗೇರಿಸಲಾಗಿದೆ.

ರಾಜ್ಯದಲ್ಲಿ ಪ್ರತಿಯೊಂದು ಪ್ರೌಢಶಾಲೆಗೆ ವಸತಿ ಗೃಹಗಳನ್ನು ಮಂಜೂರು ಮಾಡುವ ಬಗ್ಗೆ.

1270(1218) ಶ್ರೀ ಪಾಟೀಲ್ ಜೆ.ಟಿ. (ಬೀಳಗಿ) :— ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ರಾಜ್ಯದಲ್ಲಿ ಪ್ರತಿಯೊಂದು ಪ್ರೌಢಶಾಲೆಗೆ ವಸತಿಗೃಹಗಳನ್ನು ಮಂಜೂರು ಮಾಡಲು ಸರ್ಕಾರ ಕ್ರಮ ಕೈಗೊಂಡಿದೆಯೇ;

ಆ) ವಸತಿ ಗೃಹಗಳನ್ನು ಪ್ರಾರಂಭಿಸಲು ಕ್ರಮ ಕೈಗೊಂಡಿದ್ದಲ್ಲಿ, ಎಷ್ಟು ವರ್ಷಗಳಲ್ಲಿ ಪ್ರಕ್ರಿಯೆ ಮುಗಿಯಬಹುದು; ತಿಳಿಸುವುದು;

ಇ) ಇಂಥ ಯೋಜನೆ ಸರ್ಕಾರ ಹಾಕಿಕೊಂಡಿರದಿದ್ದಲ್ಲಿ, ಈಗಲಾದರೂ ವಸತಿ ಗೃಹಗಳನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು) :—

ಅ) ಪ್ರತಿಯೊಂದು ಪ್ರೌಢ ಶಾಲೆಗೆ ಮಾತಿಗೃಹಗಳನ್ನು ಮಂಜೂರು ಮಾಡುವ ಯೋಜನೆಯು ಸಮಾಜ ಕಲ್ಯಾಣ ಇಲಾಖೆಯಲ್ಲಿ ಇರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಇಲ್ಲ.

ಕೇಂದ್ರದಿಂದ ರಾಜ್ಯಕ್ಕೆ ಜವಳಿ ಉದ್ದಿಮೆಯ ಅಭಿವೃದ್ಧಿಗಾಗಿ ನೀಡಿದ ಅನುದಾನ.

1272(1208) ಶ್ರೀ ಪಾಟೀಲ್ ಶಿವಾನಂದ ಸಿದ್ಧರಾಮಪ್ಪ (ವಿಜಯಪುರ) :— ಮಾನ್ಯ ರೇಷ್ಮೆ ಮತ್ತು ಜವಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಕೇಂದ್ರ ಸರ್ಕಾರವು ರಾಜ್ಯಕ್ಕೆ ಜವಳಿ ಇಲಾಖೆಯ ಮತಿಯಂದ ಜವಳಿ ಉದ್ಯಮದ ಅಭಿವೃದ್ಧಿಗಾಗಿ ಹಣಕಾಸಿನ ನೆರವನ್ನಾದರು ನೀಡಿದೆಯೇ?

ಆ) ನೀಡಿದ್ದರೆ ಕಳೆದ ಮೂರು ವರ್ಷಗಳಲ್ಲಿ ಎಷ್ಟು ಅನುದಾನವನ್ನು ಒದಗಿಸಿದೆ?

ಇ) ಈ ಹಣವನ್ನು ರಾಜ್ಯ ಸರ್ಕಾರವು ಪೂರ್ಣವಾಗಿ ಉಪಯೋಗಿಸಿದೆಯೇ? ಉಪಯೋಗಿಸಿದ್ದರೆ ಯಾವ ಯಾವ ಅಭಿವೃದ್ಧಿ ಕಾರ್ಯವನ್ನು ಅವರಡಿ ಸರ್ಕಾರ ಕೈಗೊಂಡಿದೆ.

ಈ) ಉಪಯೋಗಿಸದೆ ಇದ್ದರೆ ಕಾರಣಗಳೇನು? ಸರ್ಕಾರ ಏಕೆ ಈ ರೀತಿಯಾಗಿ ಕೇಂದ್ರದ ಅನುದಾನವನ್ನು ಬಳಸುತ್ತಿಲ್ಲ?

ಉ) ಇನ್ನೂ ಏನಾದರೂ ಕೇಂದ್ರ ಸರ್ಕಾರದಿಂದ ಅನುದಾನ ಮೊತ್ತ ಬರಬೇಕಾಗಿದೆಯೇ?

ಶ್ರೀ ಎಂ. ಮಹದೇವ್ (ರೇಷ್ಮೆ ಮತ್ತು ಜವಳಿ ಸಚಿವರು) :—

ಅ) ಹೌದು.

ಆ) ಕಳೆದ ಮೂರು ವರ್ಷಗಳಲ್ಲಿ ಒಟ್ಟು ರೂ.1064.66 ಲಕ್ಷಗಳ ಅನುದಾನ ಒದಗಿಸಿದೆ.